ಕರ್ನಾಟಕ ಸರ್ಕಾರ

ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ

# ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ, 1981

(1982ರ ಅಧಿನಿಯಮ ಸಂಖ್ಯೆ 35)

# THE KARNATAKA OPEN PLACES PREVENTION OF DISFIGUREMENT) ACT, 1981

**(Act No. 35 of 1982)**

ಕರ್ನಾಟಕ ಸರ್ಕಾರದ ಮುದ್ರಣ ಲೇಖನ ಸಾಮಗ್ರಿ ಮತ್ತು ಪ್ರಕಟಣೆಗಳ ನಿರ್ದೇಶಕರಿಂದ
ಮುದ್ರಿತವಾಗಿ ಪ್ರಕಟಿತವಾಗಿದೆ.

**ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವಾಲಯ**
**ಅಧಿಸೂಚನೆ**

**ಕ್ರಮಾಂಕ ಲಾ 132 ಎಲ್‌ಎಮ್‌ಪಿ 86 ದಿನಾಂಕ 8/9–12–1986**

ಕರ್ನಾಟಕ ರಾಜಭಾಷಾ ಅಧಿನಿಯಮ, 1963 (ಕರ್ನಾಟಕ ಅಧಿನಿಯಮ 1963ರ 26)ರ 5ಎ ಪ್ರಕರಣದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ರಾಜ್ಯದ ರಾಜ್ಯಪಾಲನಾದ ನಾನು ಶ್ರೀ ಎ.ಎನ್. ಬ್ಯಾನರ್ಜಿ, ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ, 1981ರ ಕನ್ನಡ ಭಾಷೆಯಲ್ಲಿರುವ ಈ ಮುಂದಿನ ಭಾಷಾಂತರವು ಸರ್ಕಾರಿ ರಾಜಪತ್ರದಲ್ಲಿ ಈ ಅಧಿಸೂಚನೆ ಪ್ರಕಟವಾದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ ಕನ್ನಡ ಭಾಷೆಯಲ್ಲಿ ಅದರ ಅಧಿಕೃತ ಪಾಠವಾಗಿರತಕ್ಕದ್ದೆಂದು ಈ ಮೂಲಕ ನಿರ್ದಿಷ್ಟಪಡಿಸುತ್ತೇನೆ.

ಎ. ಎನ್. ಬ್ಯಾನರ್ಜಿ,
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಲಿಂಗಯ್ಯ,
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ
(ಆಡಳಿತ 11)

# ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ, 1981

## ವಿಷಯಾನುಕ್ರಮಣಿಕೆ


1. ಚಿಕ್ಕ ಹೆಸರು ಮತ್ತು ಪ್ರಾರಂಭ
2. ಪರಿಭಾಷೆಗಳು
3. ಜಾಹೀರಾತುಗಳ ಮೂಲಕ ಅನಧಿಕೃತವಾಗಿ ವಿರೂಪಗೊಳಿಸುವುದಕ್ಕೆ ದಂಡನೆ
4. ಕೆಲವು ಪ್ರಕರಣಗಳಲ್ಲಿ ರುಜುವಾತಿನ ಭಾರ
5. ದುಷ್ಪ್ರೇರಕನಿಗೆ ದಂಡನೆ
6. ಕಂಪನಿಗಳಿಂದ ಅಪರಾಧಗಳು
7. ನಷ್ಟ ಭರ್ತಿ
8. ಅಪರಾಧಗಳ ಸಂಜ್ಞೇಯತೆ
9. ಇತರ ಕಾನೂನುಗಳಿಗೆ ಬಾಧಕವಾಗತಕ್ಕದಲ್ಲ
10. ನಿಯಮ ರಚನಾಧಿಕಾರ
11. ನಿರಸನ ಮತ್ತು ಉಳಿಸುವಿಕೆಗಳು

# ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ, 1981

(1982ರ ಅಧಿನಿಯಮ ಸಂಖ್ಯೆ 35)

(1982ರ ಆಗಸ್ಟ್ ಇಪ್ಪತ್ತೆಂಟನೆಯ ದಿನದಂದು ರಾಷ್ಟ್ರಪತಿಯವರ ಅನುಮತಿಯನ್ನು ಪಡೆದಿದೆ)

ಕರ್ನಾಟಕ ರಾಜ್ಯದಲ್ಲಿ ಸಾರ್ವಜನಿಕ ದೃಷ್ಟಿಗೆ ಒಳಗಾಗಿರುವ ಸ್ಥಳಗಳನ್ನು ಅನಧಿಕೃತ ಜಾಹೀರಾತುಗಳ ಮೂಲಕ ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ ಅಧಿನಿಯಮ.

ಕರ್ನಾಟಕ ರಾಜ್ಯದಲ್ಲಿ ಸಾರ್ವಜನಿಕ ದೃಷ್ಟಿಗೆ ಒಳಗಾಗಿರುವ ಸ್ಥಳಗಳನ್ನು ಅನಧಿಕೃತ ಜಾಹೀರಾತುಗಳ ಮೂಲಕ ವಿರೂಪಗೊಳಿಸುವುದನ್ನು ಪ್ರತಿಬಂಧಿಸುವುದು ವಿಹಿತವಾಗಿರುವುದರಿಂದ;

ಭಾರತ ಗಣರಾಜ್ಯದ ಮೂವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗತಕ್ಕದ್ದು:-

**1. ಚಿಕ್ಕ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧಿನಿಯಮ, 1981 ಎಂದು ಕರೆಯತಕ್ಕದ್ದು.

(2) ಇದು,-

(i) ಕರ್ನಾಟಕ ಮುನ್ಸಿಪಲ್ ಕಾರ್ಪೊರೇಷನ್ ಅದಿನಿಯಮ, 1976 ಅಥವಾ ಯಾವುದೇ ಇತರ ಕಾನೂನಿನ ಮೇರೆಗೆ ರಚಿತವಾದ ಅಥವಾ ಮುಂದುವರೆಸಲಾದ, ಬೆಂಗಳೂರು, ಮೈಸೂರು, ಹುಬ್ಬಳ್ಳಿ-ಧಾರವಾಡ, ಮಂಗಳೂರು ಮತ್ತು ಬೆಳಗಾವಿ ನಗರಗಳಲ್ಲಿ 1981ರ ಮೇ ಐದನೇ ದಿನದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

(ii) ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ಅಥವಾ ಯಾವುದೇ ಇತರ ಕಾನೂನಿನ ಮೇರೆಗೆ ರಚಿತವಾದ ಅಥವಾ ಮುಂದುವರೆಸಲಾದ ಪೌರಸಭೆಗಳು, ಅಧಿಸೂಚಿತ ಪ್ರದೇಶಗಳು, ನೈರ್ಮಲ್ಯ ಮಂಡಲಿಗಳು-ಮೊದಲಾದವುಗಳಲ್ಲಿ ಅಥವಾ ಯಾವುದೇ ಇತರ ಸ್ಥಳೀಯ ಪ್ರದೇಶದಲ್ಲಿ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದ ದಿನಾಂಕದಂದು ಜಾರಿಗೆ ಬರತಕ್ಕದ್ದು ಮತ್ತು ಬೇರೆ ಬೇರೆ ಪ್ರದೇಶಗಳಿಗೆ ಸಂಬಂಧಿಸಿದಂತೆ ಬೇರೆ ಬೇರೆ ದಿನಾಂಕಗಳನ್ನು ಗೊತ್ತುಪಡಿಸಬಹುದು.

**2. ಪರಿಭಾಷೆಗಳು.–** ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಜಾಹೀರಾತು" ಎಂದರೆ ಯಾವುದೇ ಮುದ್ರಿತ, ಸೈಕ್ಲೋಸ್ಟೈಲ್ ಮಾಡಿದ, ಬೆರಳಚ್ಚು ಮಾಡಿದ ಅಥವಾ ಬರೆದ ನೋಟೀಸು, ದಸ್ತಾವೇಜು, ಕಾಗದ ಅಥವಾ ಯಾವುದೇ ಅಕ್ಷರ, ಪದ, ಚಿತ್ರ, ಚಿಹ್ನೆ ಅಥವಾ ದೃಶ್ಯ ರೂಪಣಗಳನ್ನು ಒಳಗೊಂಡ ಇತರ ಯಾವುದೇ ವಸ್ತು;

(ಬಿ) "ಸಾರ್ವಜನಿಕರ ದೃಷ್ಟಿಗೆ ಒಳಗಾಗಿರುವ ಸ್ಥಳ" ಎಂಬುದು ಯಾವುದೇ ಸಾರ್ವಜನಿಕ ಸ್ಥಳದಲ್ಲಿರುವ ಅಥವಾ ಅದರ ಮೂಲಕ ಹಾದುಹೋಗುವ ವ್ಯಕ್ತಿಗೆ ಗೋಚರವಾಗಬಹುದಾದ ಯಾವುದೇ ಖಾಸಗಿ ಸ್ಥಳ ಅಥವಾ ಕಟ್ಟಡ, ಸ್ಮಾರಕ, ಪ್ರತಿಮೆ, ಕಂಬ, ಗೋಡೆ, ಬೇಲಿ, ಮರ ಅಥವಾ ಸಾಧನವನ್ನು ಒಳಗೊಳ್ಳುತ್ತದೆ;

(ಸಿ) "ಸಾರ್ವಜನಿಕ ಸ್ಥಳ" ಎಂದರೆ ಸಾರ್ವಜನಿಕರಿಗೆ ಪ್ರವೇಶಾವಕಾಶವನ್ನು ಕೊಟ್ಟಿರುವ ಅಥವಾ ಅಲ್ಲಿ ಹಕ್ಕನ್ನು ಹೊಂದಿರುವ ಅಥವಾ ಅದರ ಮೇಲೆ ಹಾದು ಹೋಗಲು ಹಕ್ಕನ್ನು ಹೊಂದಿರುವ ಯಾವುದೇ ಸ್ಥಳ. (ಇದರಲ್ಲಿ ರಸ್ತೆ, ಬೀದಿ ಅಥವಾ ದಾರಿ– ಅವು ರಾಜ ಮಾರ್ಗವಾಗಿರಲಿ ಅಥವಾ ಆಗಿಲ್ಲದಿರಲಿ ಮತ್ತು ಇಳಿದಾಣ ಇವು ಸೇರುತ್ತವೆ).

3. **ಜಾಹೀರಾತುಗಳ ಮೂಲಕ ಅನಧಿಕೃತವಾಗಿ ವಿರೂಪಗೊಳಿಸುವುದಕ್ಕೆ ದಂಡನೆ.–** ಯಾವನಾದರೂ ತಾನಾಗಿಯೇ ಅಥವಾ ಇನ್ನೊಬ್ಬ ವ್ಯಕ್ತಿಯ ಮೂಲಕ, ಯಾವುದೇ ಜಾಹೀರಾತನ್ನು, ಅಂಥ ಪ್ರದೇಶದ ಮೇಲೆ ಅಧಿಕಾರ ವ್ಯಾಪ್ತಿ ಹೊಂದಿರುವ ಸ್ಥಳೀಯ ಪ್ರಾಧಿಕಾರದ ಲಿಖಿತ ಅನುಮತಿಯನ್ನು ಪಡೆಯದೆ ಸಾರ್ವಜನಿಕರ ದೃಷ್ಟಿಗೆ ಒಳಗಾಗಿರುವ ಯಾವುದೇ ಸ್ಥಳದ ಮೇಲೆ ಅಂಟಿಸಿದರೆ, ನಿಲ್ಲಿಸಿದರೆ, ಲೇಖಿಸಿದರೆ ಅಥವಾ ಪ್ರದರ್ಶಿಸಿದರೆ, ಆರು ತಿಂಗಳವರೆಗೆ ವಿಸ್ತರಿಸಬಹುದಾದ ಅವಧಿಯ ಎರಡರಲ್ಲೊಂದು ಬಗೆಯ ಕಾರಾವಾಸದಿಂದ ಅಥವಾ ಒಂದು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು:

ಪರಂತು, ಈ ಪ್ರಕರಣದಲ್ಲಿರುವುದಾವುದೂ,–

(i) ಯಾವುದೇ ಕಟ್ಟಡದ ಕಿಟಕಿಯ ಒಳಗೆ ಪ್ರದರ್ಶಿಸಿರುವ ಜಾಹೀರಾತು ಆ ಕಟ್ಟಡದಲ್ಲಿ ನಡೆಸಲಾಗುತ್ತಿರುವ ವ್ಯಾಪಾರ, ವೃತ್ತಿ ಅಥವಾ ವ್ಯವಹಾರಕ್ಕೆ ಸಂಬಂಧಿಸಿದ್ದರೆ; ಅಥವಾ,

(ii) ಯಾವ ಭೂಮಿ ಅಥವಾ ಕಟ್ಟಡದ ಮೇಲೆ ಅಥವಾ ಮೇಲುಗಡೆ ಅಂಥ ಜಾಹೀರಾತನ್ನು ಪ್ರದರ್ಶಿಸಲಾಗಿದೆಯೋ ಆ ಭೂಮಿ ಅಥವಾ ಕಟ್ಟಡದಲ್ಲಿ ನಡೆಸಲಾಗುತ್ತಿರುವ ವ್ಯಾಪಾರ, ವೃತ್ತಿ ಅಥವಾ ವ್ಯವಹಾರಕ್ಕೆ ಅಥವಾ ಅಂಥ ಭೂಮಿ ಅಥವಾ ಕಟ್ಟಡ ಅಥವಾ ಅದರಲ್ಲಿರುವ ಸಾಮಾನುಗಳ ಯಾವುದೇ ಮಾರಾಟಕ್ಕೆ ಅಥವಾ

ಬಾಡಿಗೆಗೆ ಕೊಡುವುದಕ್ಕೆ ಅಥವಾ ಅದರ ಮೇಲೆ ಅಥವಾ ಅದರಲ್ಲಿ ನಡೆಸಬೇಕಾದ ಯಾವುದೇ ಮಾರಾಟ, ಮನರಂಜನೆ ಅಥವಾ ಸಭೆಗೆ ಸಂಬಂಧಿಸಿದ್ದರೆ; ಅಥವಾ

(iii) ಯಾವ ಭೂಮಿ ಅಥವಾ ಕಟ್ಟಡದ ಮೇಲೆ ಅಥವಾ ಮೇಲುಗಡೆಯಲ್ಲಿ ಜಾಹೀರಾತನ್ನು ಪ್ರದರ್ಶಿಸಲಾಗಿದೆಯೋ, ಆ ಭೂಮಿ ಅಥವಾ ಕಟ್ಟಡದ ಹೆಸರು ಅಥವಾ ಅಂಥ ಭೂಮಿ ಅಥವಾ ಕಟ್ಟಡದ ಒಡೆಯ ಅಥವಾ ಅಧಿಭೋಗದಾರನ ಹೆಸರಿಗೆ ಸಂಬಂಧಿಸಿದ್ದರೆ;

(iv) ರೈಲು ಆಡಳಿತ ವ್ಯವಹಾರಕ್ಕೆ ಹಾಗೂ ಯಾವುದೇ ರೈಲು ನಿಲ್ದಾಣದೊಳಗೆ ಅಥವಾ ರೈಲ್ವೇ ಆಡಳಿತಕ್ಕೆ ಸೇರಿದ ಯಾವುದೇ ಗೋಡೆ ಅಥವಾ ಇತರ ಸ್ವತ್ತಿನ ಮೇಲೆ ಪ್ರದರ್ಶಿಸಿರುವುದಕ್ಕೆ ಸಂಬಂಧಿಸಿದ್ದರೆ;

–ಆ ಯಾವುದೇ ಜಾಹೀರಾತಿಗೆ ಅನ್ವಯಿಸತಕ್ಕದ್ದಲ್ಲ

**4. ಕೆಲವು ಪ್ರಕರಣಗಳಲ್ಲಿ ರುಜುವಾತಿನ ಭಾರ.–** ವ್ಯಕ್ತಿಯು 3ನೇ ಪ್ರಕರಣದ ಮೇರೆಗೆ ಅಪರಾಧವನ್ನು ಮಾಡಿರುವುದಕ್ಕಾಗಿ, ಅವನನ್ನು ಪ್ರಾಸಿಕ್ಯೂಷನ್ ಮಾಡಿರುವಲ್ಲಿ, ಅ ಪ್ರಕರಣದಲ್ಲಿ ಉಲ್ಲೇಖಿಸಿರುವ ಲಿಖಿತ ಅನುಮತಿಯನ್ನು ಅವನು ಹೊಂದಿದ್ದಾನೆಂಬ ಬಗ್ಗೆ ರುಜುವಾತು ಮಾಡುವ ಭಾರವು ಅವನ ಮೇಲೆ ಇರತಕ್ಕದ್ದು.

5. **ದುಷ್ಪ್ರೇರಕರಿಗೆ ದಂಡನೆ.–** ಯಾರಾದರೂ ಎಂಥದೇ ರೀತಿಯ ಅಪರಧವನ್ನು ಮಾಡಲು ಕಾರಣನಾದರೆ, ಒದಗಿಸಿದರೆ ಸಲಹೆ ಕೊಟ್ಟರೆ, ಸಹಾಯ ಮಾಡಿದರೆ, ದುಷ್ಪ್ರೇರಿಸಿದರೆ ಅಥವಾ ಸಹಾಯಕನಾಗಿದ್ದರೆ ಅವನು ಅಪರಾಧ ನಿರ್ಣೀತನಾದ ಮೇಲೆ ಆ ಅಪರಾಧಕ್ಕಾಗಿ ಉಪಬಂಧಿಸಿದ ದಂಡನೆಯಿಂದ ದಂಡಿತನಾಗತಕ್ಕದ್ದು.

**6. ಕಂಪನಿಗಳಿಂದ ಅಪರಾಧಗಳು.–** (1) ಈ ಅಧಿನಿಯಮದ ಮೇರೆಗೆ ದಂಡನೀಯವಾದ ಯಾವುದೇ ಅಪರಾಧವನ್ನು ಮಾಡುವ ವ್ಯಕ್ತಿಯು ಒಂದು ಕಂಪನಿಯಾಗಿದ್ದರೆ, ಅಪರಾಧವು ನಡೆದ ಕಾಲದಲ್ಲಿ ವ್ಯವಹಾರಗಳನ್ನು ನಡೆಸುವುದಕ್ಕಾಗಿ ಕಂಪನಿಯ ಆಡಳಿತವನ್ನು ಹೊಂದಿದ್ದ ಮತ್ತು ಕಂಪನಿಗೆ ಹೊಣೆಗಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಮತ್ತು ಕಂಪನಿಯನ್ನು ಆ ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು ಮತ್ತು ತನ್ನ ವಿರುದ್ಧದ ವ್ಯವಹರಣೆಗೆ ಗುರಿಯಾಗತಕ್ಕದ್ದು ಹಾಗೂ ಅದಕ್ಕನುಸಾರವಾಗಿ ದಂಡಿತರಾಗತಕ್ಕದ್ದು;

ಪರಂತು, ಈ ಉಪಪ್ರಕರಣದಲ್ಲಿ ಇರುವುದು ಯಾವುದೂ, ಅಂಥ ಅಪರಾಧವು ತನಗೆ ಗೊತ್ತಿಲ್ಲದಂತೆ ನಡೆಯಿತೆಂದು ಅಥವಾ ಅಂಥ ಅಪರಾಧವು ನಡೆಯುವುದನ್ನು ತಡೆಗಟ್ಟಲು ತಾನು ಎಲ್ಲ ಯುಕ್ತ ಶ್ರದ್ದೆಯನ್ನು ವಹಿಸಿದ್ದನೆಂದು ಅಂಥ ಯಾರೇ ವ್ಯಕ್ತಿಯು ರುಜುವಾತುಪಡಿಸಿದರೆ, ಅವನನ್ನು ಈ ಅಧಿನಿಯಮದಲ್ಲಿ ಉಪಬಂಧಿಸಿದ ಯಾವುದೇ ದಂಡನೆಗೆ ಗುರಿಪಡಿಸತಕ್ಕದಲ್ಲ.

(2) (1)ನೇ ಉಪಪ್ರಕರಣದಲ್ಲಿ ಏನೇ ಅಡಕವಾಗಿದ್ದರೂ, ಈ ಅಧಿನಿಯಮದ ಮೇರೆಗಿನ ಅಪರಾಧವನ್ನು ಕಂಪನಿಯು ಮಾಡಿರುವಲ್ಲಿ, ಮತ್ತು ಆ ಅಪರಾಧವು ಕಂಪನಿಯ ಯಾರೇ ನಿರ್ದೇಶಕ, ವ್ಯವಸ್ಥಾಪಕ, ಕಾರ್ಯದರ್ಶಿ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ಅಥವಾ ಪರೋಕ್ಷ ಸಮ್ಮತಿಯಿಂದ ನಡೆಯಿತೆಂದು ಅಥವಾ ಯಾವುದೇ ಅತೀವ ನಿರ್ಲಕ್ಷತೆಯ ಕಾರಣದಿಂದ ನಡೆಯಿತೆಂದು ರುಜುವಾತಾದರೆ, ಅವನನ್ನೂ ಸಹ ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು; ಮತ್ತು ಅವನು ತನ್ನ ವಿರುದ್ದದ ವ್ಯವಹರಣೆಗೆ ಗುರಿಯಾಗತಕ್ಕದ್ದು ಮತ್ತು ಅದಕ್ಕನುಸಾರವಾಗಿ ದಂಡಿತನಾಗತಕ್ಕದ್ದು.

ವಿವರಣೆ.– ಈ ಪ್ರಕರಣದ ಉದ್ದೇಶಕ್ಕಾಗಿ,–

(ಎ) "ಕಂಪನಿ" ಎಂದರೆ ಯಾವುದೇ ನಿಗಮಿತ ನಿಕಾಯ ಮತ್ತು ಫರ್ಮನ್ನು ಅಥವಾ ವ್ಯಕ್ತಿಗಳ ಇತರ ಸಂಘವನ್ನು ಒಳಗೊಳ್ಳುತ್ತದೆ; ಮತ್ತು

(ಬಿ) ಒಂದು ಫರ್ಮಿನ ಸಂಬಂಧದಲ್ಲಿ "ನಿರ್ದೇಶಕ" ಎಂದರೆ ಆ ಫರ್ಮಿನ ಪಾಲುಗಾರ.

**7. ನಷ್ಟ ಭರ್ತಿ.–** ಈ ಅಧಿನಿಯಮದ ಮೇರೆಗೆ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯದ ಬಗ್ಗೆ ರಾಜ್ಯ ಸರ್ಕಾರದ, ಯಾವುದೇ ಸ್ಥಳೀಯ ಪ್ರಾಧಿಕಾರದ ಅಥವಾ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಕಾನೂನು ವ್ಯವಹರಣೆಯನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**8. ಅಪರಾಧಗಳ ಸಂಜ್ಞೇಯತೆ.–** ದಂಡ ಪ್ರಕ್ರಿಯಾ ಸಂಹಿತೆ, 1973 (ಕೇಂದ್ರ ಅಧಿನಿಯಮ 1974ರ 2) ರಲ್ಲಿ ಏನೇ ಅಡಕವಾಗಿದ್ದಾಗ್ಯೂ, ಈ ಅಧಿನಿಯಮದ ಮೇರೆಗೆ ದಂಡನೀಯವಾದ ಯಾವುದೇ ಅಪರಾಧವನ್ನು, ಆ ಸಂಹಿತೆಯ ಅರ್ಥವ್ಯಾಪ್ತಿಯಲ್ಲಿ ಸಂಜ್ಞೇಯವಾದ ಅಪರಾಧವೆಂದು ಭಾವಿಸತಕ್ಕದ್ದು.

**9. ಇತರ ಕಾನೂನುಗಳಿಗೆ ಭಾಧಕವಾಗತಕ್ಕದ್ದಲ್ಲ.–** ಈ ಅಧಿನಿಯಮದ ಉಪಬಂಧಗಳು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಉಪಬಂಧಗಳಿಗೆ ಜೊತೆಗೆ ಇರತಕ್ಕದ್ದೇ ಹೊರತು ಅವುಗಳನ್ನು ಅಲ್ಪೀಕರಿಸತಕ್ಕದ್ದಲ್ಲ.

**10. ನಿಯಮ ರಚನಾಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಮೇರೆಗೆ ರಾಜ್ಯ ಸರ್ಕಾರವು ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚಿನ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಇಡತಕ್ಕದ್ದು ಮತ್ತು ಹಿಂದೆ ಹೇಳಿದ ನಿಕಟ ತರುವಾಯದ ಅಧಿವೇಶನವು ಅಥವಾ ಒಂದಾದ ಮೇಲೊಂದರಂತೆ ಬರುವ ಅಧಿವೇಶನಗಳ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ  ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಸಂದರ್ಭಾನುಸಾರ, ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಭಾದೆಯನ್ನುಂಟುಮಾಡತಕ್ಕದ್ದಲ್ಲ.

**11. ನಿರಸನ ಮತ್ತು ಉಳಿಸುವಿಕೆಗಳು:–** (1) ಕರ್ನಾಟಕ ಬಹಿರಂಗ ಸ್ಥಳಗಳ (ವಿರೂಪಗೊಳಿಸುವುದನ್ನು ಪ್ರತಿಬಂಧಿಸುವ) ಅಧ್ಯಾದೇಶ, 1981 (ಕರ್ನಾಟಕ ಆಧ್ಯಾದೇಶ 1981 ರ 10) ಈ ಮೂಲಕ ನಿರಸಿತವಾಗಿದೆ.

(2) ಹಾಗೆ ನಿರಸಿತವಾಗಿದ್ದರೂ, ಸದರಿ ಅಧ್ಯಾದೇಶದ ಮೇರೆಗೆ ಮಾಡಿದ ಯಾವುದೇ ಕಾರ್ಯ ಅಥವಾ ಕೈಕೊಂಡ ಕ್ರಮವನ್ನು ಈ ಅಧಿನಿಯಮದ ಮೇರೆಗೆ ಮಾಡಲಾಗಿದೆಯೆಂದು ಅಥವಾ ಕೈಗೊಳ್ಳಲಾಗಿದೆಯೆಂದು ಭಾವಿಸತಕ್ಕದ್ದು.